# National
# Kannada
# 16.02.2025 13.10 P.M.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ದೆಹಲಿ ಕಾಲ್ತುಳಿತ ಪ್ರಕರಣ; ಮೃತರ ಸಂಖ್ಯೆ 18 ಕ್ಕೆ ಏರಿಕೆ; ರೈಲ್ವೆ ಇಲಾಖೆಯಿಂದ ಸಂತ್ರಸ್ತರ ಕುಟುಂಬಗಳಿಗೆ 10 ಲಕ್ಷ ರೂಪಾಯಿ ಪರಿಹಾರ; ಘಟನೆ ತನಿಖೆಗೆ ಸಮಿತಿ ರಚನೆ
2. ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಕತಾರ್ ಅಮೀರ್ ನಾಳೆ ಭಾರತಕ್ಕೆ ಅಧಿಕೃತ ಭೇಟಿ
3. ಮ್ಯೂನಿಚ್ ಭದ್ರತಾ ಸಮ್ಮೇಳನದ ನೇಪಥ್ಯದಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ – ಇಸ್ರೇಲ್ ಸಹವರ್ತಿ ಗಿಡೆಯಾನ್ ಸಾರ್ ಮಾತುಕತೆ
4. ಮಹಿಳಾ ಪ್ರೀಮಿಯರ್ ಲೀಗ್; ಇಂದು ಗುಜರಾತ್ ಜೈಂಟ್ಸ್ ಹಾಗೂ ಯುಪಿ ವಾರಿಯರ್ಸ್ ಮುಖಾಮುಖಿ

***************

ನವದೆಹಲಿ ರೈಲು ನಿಲ್ದಾಣದಲ್ಲಿ ಪ್ರಯಾಗ್‌ರಾಜ್‌ಗೆ ಪ್ರಯಾಣ ಬೆಳೆಸುತ್ತಿದ್ದ ರೈಲನ್ನು ಹಿಡಿಯುವ ಸಂದರ್ಭದಲ್ಲಿ ನೂಕುನುಗ್ಗಲು ಉಂಟಾದ ಪರಿಣಾಮ ನಿನ್ನೆ ಸಂಭವಿಸಿದ ಕಾಲ್ತುಳಿತದಲ್ಲಿ ಮೃತಪಟ್ಟವರ ಸಂಖ್ಯೆ 18 ಕ್ಕೆ ಏರಿಕೆಯಾಗಿದೆ. ಮೃತರಲ್ಲಿ 11 ಮಹಿಳೆಯರು, ಐದು ಮಕ್ಕಳು ಸೇರಿದ್ದಾರೆ.

ರೈಲು ನಿಲ್ದಾಣದ 14 ಹಾಗೂ 15ನೇ ಪ್ಲಾಟ್‌ಫಾರ್ಮ್‌ಗಳಲ್ಲಿ ನಿನ್ನೆ ರಾತ್ರಿ 8 ಗಂಟೆಯ ಸುಮಾರಿಗೆ ಜನ ದಟ್ಟಣೆಯ ನಡುವೆ ಪರಿಸ್ಥಿತಿ ಅಸ್ತವ್ಯಸ್ತಗೊಂಡಿತು.

ಘಟನೆ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ಅಶ್ವಿನಿ ವೈಷ್ಣವ್, ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸಕ್ಸೇನಾ ಸೇರಿದಂತೆ ಹಲವು ಗಣ್ಯರು ದುಃಖ ವ್ಯಕ್ತಪಡಿಸಿದ್ದು, ಕಾಲ್ತುಳಿತದಲ್ಲಿ ಮೃತರಾದವರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಹಾಗೆಯೇ ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ.

ಕಾಲ್ತುಳಿತದ ಸಂತ್ರಸ್ತ ಕುಟುಂಬಗಳಿಗೆ ರೈಲ್ವೆ ಇಲಾಖೆ ಪರಿಹಾರ ಘೋಷಿಸಿದೆ. ಮೃತಪಟ್ಟವರ ಕುಟುಂಬದವರಿಗೆ 10 ಲಕ್ಷ ಹಾಗೂ ತೀವ್ರವಾಗಿ ಗಾಯಗೊಂಡವರಿಗೆ ಎರಡೂವರೆ ಲಕ್ಷ ರೂಪಾಯಿ, ಸಣ್ಣ ಪ್ರಮಾಣದಲ್ಲಿ ಗಾಯಗೊಂಡವರಿಗೆ 1 ಲಕ್ಷ ರೂಪಾಯಿ ಪರಿಹಾರ ಘೋಷಿಸಲಾಗಿದೆ ಎಂದು ಉತ್ತರ ರೈಲ್ವೆ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಾಹಿತಿ ನೀಡಿದ್ದಾರೆ.

ಧ್ವನಿ: ರೈಲ್ವೆ ಸಾರ್ವಜನಿಕ ಸಂಪರ್ಕ ಅಧಿಕಾರಿ ( 18 ಸೆಕೆಂಡ್‌ಗಳು)

ಬಿಹಾರ್ ಮುಖ್ಯಮಂತ್ರಿ ನಿತೀಶ್‌ಕುಮಾರ್, ಬಿಹಾರ್ ಮೂಲದ ಮೃತರ ಕುಟುಂಬಗಳಿಗೆ 2 ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ 50 ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

ಘಟನೆ ಕುರಿತಂತೆ ತನಿಖೆ ನಡೆಸಲು ರೈಲ್ವೆ ಇಲಾಖೆ ಸಮಿತಿ ರಚಿಸಿದ್ದು, ವಾಣಿಜ್ಯ ಪ್ರಧಾನ ವ್ಯವಸ್ಥಾಪಕ ನರಸಿಂಗ್ ದೇವ್ ಮತ್ತು ಭದ್ರತಾ ಪ್ರಧಾನ ಆಯುಕ್ತ ಪಂಕಜ್ ಗಂಗ್ವಾರ್ ಈ ಸಮಿತಿಯ ಭಾಗವಾಗಿದ್ದಾರೆ.

ಸಮಿತಿ ತನಿಖೆಯನ್ನು ಆರಂಭಿಸಿದ್ದು, ನವದೆಹಲಿ ರೈಲ್ವೆ ನಿಲ್ದಾಣದ ಎಲ್ಲಾ ಸಿಸಿ ಟಿವಿ ಕ್ಯಾಮೆರಾಗಳ ವೀಡಿಯೋ ದೃಶ್ಯಾವಳಿಗಳನ್ನು ಸಂಗ್ರಹಿಸಲ ಆದೇಶ ನೀಡಿದೆ.

***************

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಕತಾರ್ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್–ಥಾನಿ ನಾಳೆ ಮತ್ತು ನಾಡಿದ್ದು, ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ.

ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ವ್ಯಾಪಾರ ನಿಯೋಗ ಸೇರಿದಂತೆ ಉನ್ನತ ಮಟ್ಟದ ನಿಯೋಗ ಭಾರತಕ್ಕೆ ಭೇಟಿ ನೀಡಲಿದೆ. ಭಾರತಕ್ಕೆ ಕತಾರ್ ಅಮೀರ್ ಅವರ ಎರಡನೇ ಭೇಟಿ ಇದಾಗಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಅವರು ಈ ಹಿಂದೆ ಮಾರ್ಚ್ 2015 ರಲ್ಲಿ ಭಾರತಕ್ಕೆ ಭೇಟಿ ನೀಡಿದ್ದರು.

ಶೇಖ್ ತಮೀಮ್ ಬಿನ್ ಹಮದ್ ಅಲ್-ಥಾನಿ ಅವರಿಗೆ ಇದೇ 18 ರಂದು ರಾಷ್ಟ್ರಪತಿ ಭವನದ ಆವರಣದಲ್ಲಿ ಔಪಚಾರಿಕ ಸ್ವಾಗತ ನೀಡಲಾಗುವುದು, ಅಮೀರ್ ಅವರು ತಮ್ಮ ಭೇಟಿಯ ಸಮಯದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಈ ನಡುವೆ ರಾಷ್ಟ್ರಪತಿಯವರು ಅಮೀರ್ ಅವರಿಗೆ ಗೌರವಾರ್ಥವಾಗಿ ಔತಣಕೂಟವನ್ನು ಸಹ ಆಯೋಜಿಸಲಿದ್ದಾರೆ. ಅಮೀರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳನ್ನು ಒಳಗೊಂಡ ವಿಸ್ತೃತ ಚರ್ಚೆ ನಡೆಸಲಿದ್ದಾರೆ.

ಭಾರತ ಮತ್ತು ಕತಾರ್ ಸ್ನೇಹ, ವಿಶ್ವಾಸ ಮತ್ತು ಪರಸ್ಪರ ಗೌರವದ ಆಳವಾದ ಐತಿಹಾಸಿಕ ಸಂಬಂಧಗಳನ್ನು ಹೊಂದಿವೆ. ಇತ್ತೀಚಿನ ವರ್ಷಗಳಲ್ಲಿ, ವ್ಯಾಪಾರ, ಹೂಡಿಕೆ, ಇಂಧನ, ತಂತ್ರಜ್ಞಾನ, ಸಂಸ್ಕೃತಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಎರಡೂ ದೇಶಗಳ ನಡುವಿನ ಸಂಬಂಧಗಳು ಬಲಗೊಳ್ಳುತ್ತಲೇ ಇವೆ.

ಅಲ್ಲಿ ವಾಸಿಸುವ ಭಾರತೀಯ ಸಮುದಾಯವು ಕತಾರ್‌ನ ಅತಿದೊಡ್ಡ ವಲಸಿಗ ಸಮುದಾಯವಾಗಿದೆ. ಕತಾರ್ ಅಮೀರ್ ಅವರ ಭಾರತ ಭೇಟಿಯು ಬೆಳೆಯುತ್ತಿರುವ ಬಹುಮುಖ ಪಾಲುದಾರಿಕೆಗೆ ಮತ್ತಷ್ಟು ವೇಗವನ್ನು ನೀಡಲಿದೆ.

***************

ಜರ್ಮನಿಯಲ್ಲಿ ನಡೆಯುತ್ತಿರುವ ಮ್ಯೂನಿಚ್ ಭದ್ರತಾ ಸಮ್ಮೇಳನದ ನೇಪಥ್ಯದಲ್ಲಿ ನಿನ್ನೆ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹಾಗೂ ಇಸ್ರೇಲ್ ವಿದೇಶಾಂಗ ಸಚಿವ ಗಿಡೆಯಾನ್ ಸಾರ್ ಭೇಟಿಯಾದರು.

ಭೇಟಿಯ ವೇಳೆ ಉಭಯ ನಾಯಕರು, ಇಸ್ರೇಲ್ ಮೂಲಕ ಏಷ್ಯಾ ಯೂರೋಪ್ ಮತ್ತು ಅಮೆರಿಕ ನಡುವೆ ಸಂಪರ್ಕ ಸಾಧಿಸುವ ಕುರಿತ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ದೃಷ್ಟಿಕೋನದ ಬಗ್ಗೆ ಚರ್ಚಿಸಲಾಗಿದೆ ಎಂದು ಇಸ್ರೇಲ್ ವಿದೇಶಾಂಗ ಸಚಿವರ ಕಾರ್ಯಾಲಯದ ಹೇಳಿಕೆ ತಿಳಿಸಿದೆ.

ಇದೇ ವೇಳೆ ಉಭಯ ರಾಷ್ಟ್ರಗಳ ನಡುವಿನ ವ್ಯಾಪಾರ ಮಾರ್ಗಗಳಿಗೆ ಹೌತಿ ಸಂಘಟನೆ ಹಾಗೂ ಇರಾನ್ ಒಡ್ಡುತ್ತಿರುವ ಸವಾಲುಗಳ ಕುರಿತು ಚರ್ಚಿಸಲಾಗಿದೆ. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ್ದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇತಿಹಾಸದಲ್ಲೇ ಅತ್ಯಂತ ಶ್ರೇಷ್ಟ ವ್ಯಾಪಾರ ಮಾರ್ಗವೊಂದರ ನಿರ್ಮಾಣ ಕುರಿತಂತೆ ಭಾರತ ಹಾಗೂ ಅಮೆರಿಕಾ ನಡುವೆ ಒಮ್ಮತವಿದೆ ಎಂದಿದ್ದರು.

ಅಧ್ಯಕ್ಷ ಟ್ರಂಪ್ ಪ್ರಕಾರ ಈ ಮಾರ್ಗ ಭಾರತದಿಂದ ಇಸ್ರೇಲ್ ನಂತರ ಇಟಲಿ ಅನಂತರ ಅಮೆರಿಕಾಗೆ ಸಂಪರ್ಕ ಸಾಧಿಸಲು ಅನುವು ಮಾಡಿಕೊಡಲಿದ್ದು, ಪಾಲುದಾರ ರಾಷ್ಟ್ರಗಳ ನಡುವೆ ಬಂದರು, ರೈಲ್ವೆ ಮತ್ತು ಅಂತರ್ಜಲ ಮಾರ್ಗಗಳ ಮೂಲಕ ಸಂಪರ್ಕ ಸಾಧಿಸಲಿದೆ.

***************

ಛತ್ತೀಸ್‌ಗಢದಲ್ಲಿ ನಡೆದ ಮೇಯರ್ ಚುನಾವಣೆಯಲ್ಲಿ ಎಲ್ಲಾ 10 ಸ್ಥಾನಗಳನ್ನು ಗೆಲ್ಲುವ ಮೂಲಕ ಬಿಜೆಪಿ ಪಕ್ಷ ಭರ್ಜರಿ ಗೆಲುವು ಸಾಧಿಸಿದೆ.

ಛತ್ತೀಸ್‌ಗಢದಲ್ಲಿ 10 ಪಾಲಿಕೆಗಳು, 49 ನಗರಸಭೆ ಹಾಗೂ 114 ಪಂಚಾಯತ್‌ಗಳಿವೆ. ಇವುಗಳಲ್ಲಿ ಎಲ್ಲಾ 10 ಮೇಯರ್ ಸ್ಥಾನಗಳನ್ನು ಬಿಜೆಪಿ ಗೆದ್ದಿದ್ದು, 35 ನಗರಸಭೆಗಳು ಹಾಗೂ 81 ಪಂಚಾಯಿತಿಗಳಲ್ಲಿ ಬಿಜೆಪಿ ಗೆಲುವು ಸಾಧಿಸಿದೆ.

ಆಮ್ ಆದ್ಮಿ ಪಕ್ಷ 1 ನಗರಸಭೆಯನ್ನು ಗೆದ್ದಿದ್ದರೆ, ಬಿಎಸ್‌ಪಿ 1 ಪಂಚಾಯಿತಿ ಗೆದ್ದುಕೊಂಡಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಕನಿಷ್ಠ 1 ಸ್ಥಾನ ಗೆಲ್ಲಲು ವಿಫಲವಾಗಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣುದೇವ್ ಸಾಯಿ, ಬಿಜೆಪಿ ಮೇಲೆ ಛತ್ತೀಗಡದ ಜನರಿಗೆ ವಿಶ್ವಾಸವಿದ್ದು, ತಮ್ಮ ಪಕ್ಷ ಪುರಸಭೆ ಚುನಾವಣೆಯಲ್ಲಿ ಐತಿಹಾಸಿಕ ಗೆಲುವು ಸಾಧಿಸಿದೆ ಎಂದಿದ್ದಾರೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಈ ಗೆಲುವಿಗಾಗಿ ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣುದೇವ್ ಸಾಯಿ ಸೇರಿದಂತೆ ರಾಜ್ಯ ಬಿಜೆಪಿ ಘಟಕವನ್ನು ಅಭಿನಂದಿಸಿದ್ದಾರೆ.

***************

ಪ್ರಧಾನಿ ನರೇಂದ್ರ ಮೋದಿ, ಇಂದು ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಆಯೋಜಿಸಿರುವ 'ಭಾರತ ಟೆಕ್ಸ್ 2025' ಜಾಗತಿಕ ಸಮ್ಮೇಳನವನ್ನುದ್ದೇಶಿಸಿ ಮಾತನಾಡಲಿದ್ದಾರೆ.

ನವದೆಹಲಿಯ ಭಾರತ ಮಂಟಪಂನಲ್ಲಿ ಏರ್ಪಡಿಸಲಾಗಿರುವ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಸಂಜೆ 4 ಗಂಟೆಗೆ ಭಾಗವಹಿಸಲಿದ್ದಾರೆ ಎಂದು ಪ್ರಧಾನಮಂತ್ರಿ ಕಾರ್ಯಾಲಯ ಪ್ರಕಟಣೆ ತಿಳಿಸಿದೆ.

ಇದೇ 14 ರಿಂದ 17ರವರೆಗೆ ಏರ್ಪಡಿಸಲಾಗಿರುವ ವಿಶಿಷ್ಟ ಕಾರ್ಯಕ್ರಮದಲ್ಲಿ, ಕಚ್ಚಾ ವಸ್ತುಗಳು, ಬಿಡಿಭಾಗಗಳು ಸೇರಿದಂತೆ ಸಿದ್ಧಪಡಿಸಿದ ಉತ್ಪನ್ನಗಳವರೆಗಿನ ಸಂಪೂರ್ಣ ಜವಳಿ ಮೌಲ್ಯ ಸರಪಳಿಯನ್ನು ಒಂದೇ ಸೂರಿನಡಿ ತರುವ ಉದ್ದೇಶ ಸಾಕಾರಗೊಳ್ಳಲಿದೆ.

***************

ಮಹಿಳಾ ಪ್ರೀಮಿಯರ್ ಲೀಗ್–ಡಬ್ಲ್ಯುಪಿಎಲ್ 2025 ಕ್ರಿಕೆಟ್ ಪಂದ್ಯಾವಳಿಯಲ್ಲಿ ವಡೋದರದ ಕೋಟಂಬಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ಹಾಗೂ ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ 7.30 ಕ್ಕೆ ಆರಂಭವಾಗಲಿದೆ.

ಇದೇ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ 2 ವಿಕೆಟ್‌ಗಳ ಜಯ ಸಾಧಿಸಿದೆ.

***************

ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯವಾಳಿಯ ಭಾರತ ಪಂದ್ಯಗಳಿಗೆ ಹೆಚ್ಚುವರಿ ಟಿಕೆಟ್‌ಗಳನ್ನು ಇಂದು ಮಧ್ಯಾಹ್ನ 1.30 ರಿಂದ ಮಾರಾಟಕ್ಕಿಡಲಾಗಿದೆ ಎಂದು ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ–ಐಸಿಸಿ ತಿಳಿಸಿದೆ.

ಭಾರತದ ಗುಂಪು ಹಂತದ ಮೂರು ಪಂದ್ಯಗಳು ಹಾಗೂ ಪಂದ್ಯಾವಳಿಯ ಮೊದಲ ಸೆಮಿಫೈನಲ್‌ಗೆ ಹೆಚ್ಚುವರಿ ಟಿಕೆಟ್‌ಗಳು ಲಭ್ಯವಿರುತ್ತದೆ.

ಇದೇ 20 ರಂದು ಬಾಂಗ್ಲಾದೇಶದ ವಿರುದ್ಧ ನಡೆಯಲಿರುವ ಭಾರತದ ಮೊದಲ ಪಂದ್ಯ ಹಾಗೂ ನಂತರದ ಪಾಕಿಸ್ತಾನ ಹಾಗೂ ನ್ಯೂಜಿಲೆಂಡ್ ವಿರುದ್ಧದ ಪಂದ್ಯಗಳಿಗೆ ಟಿಕೆಟ್ ಲಭ್ಯವಿದೆ ಎಂದು ಐಸಿಸಿ ತಿಳಿಸಿದೆ.

ಇದರ ನಡುವೆ ಮಾರ್ಚ್ 4 ರಂದು ನಡೆಯಲಿರುವ ಮೊದಲ ಸೆಮಿಫೈನಲ್ ಪಂದ್ಯಕ್ಕೆ ಸೀಮಿತ ಟಿಕೆಟ್‌ಗಳು ಲಭ್ಯವಿವೆ ಹಾಗೂ ಪಂದ್ಯಾವಳಿಯ ಫೈನಲ್ ಪಂದ್ಯಕ್ಕೆ ಟಿಕೆಟ್‌ಗಳನ್ನು ಮೊದಲನೇ ಸೆಮಿಫೈನಲ್ ಬಳಿಕ ಮಾರಾಟಕ್ಕಿಡಲಾಗುವುದು.

2017 ರ ನಂತರ ಮೊದಲ ಬಾರಿಗೆ ಆಯೋಜಿಸಲಾಗುತ್ತಿರುವ ಚಾಂಪಿಯನ್ಸ್ ಟ್ರೋಫಿಯಲ್ಲಿ 8 ತಂಡಗಳು ಸ್ಪರ್ಧಿಸಲಿವೆ. ಚಾಂಪಿಯನ್ ತಂಡ 2.24 ಮಿಲಿಯನ್ ಅಮೆರಿಕನ್ ಡಾಲರ್ ಬಹುಮಾನ ಗೆಲ್ಲಲಿದ್ದು, ರನ್ನರ್ ಅಪ್ ತಂಡ 1.12 ಮಿಲಿಯನ್ ಹಾಗೂ ಸೆಮಿಫೈನಲ್‌ನಲ್ಲಿ ಸೋಲು ಪ್ರತಿ ತಂಡ 5 ಲಕ್ಷದ 60 ಸಾವಿರ ಅಮೆರಿಕನ್ ಡಾಲರ್ ಬಹುಮಾನ ಪಡೆಯಲಿದ್ದಾರೆ.

2017ರ ಆವೃತ್ತಿಯ ನಂತರ ಒಟ್ಟು ಬಹುಮಾನ ಮೊತ್ತವನ್ನು ಶೇಕಡ 53 ರಷ್ಟು ಹೆಚ್ಚಳ ಮಾಡಲಾಗಿದ್ದು, ಈ ಬಾರಿಯ ಬಹುಮಾನ ಮೊತ್ತ 6.9 ಮಿಲಿಯನ್ ಡಾಲಲ್‌ಗೆ ತಲುಪಿದೆ.

***************

ಕೋಲ್ಕಾತ್ತಾದ ಯುಭ ಭಾರತಿ ಕ್ರೀರಾಂಗನದಲ್ಲಿ ನಡೆಯಲಿರುವ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯದಲ್ಲಿ ಮೊಹಮಡನ್ ಎಸ್‌ಸಿ ಹಾಗೂ ಈಸ್ಟ್ ಬೆಂಗಾಲ್ ಎಫ್‌ಸಿ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ 7.30 ಕ್ಕೆ ಆರಂಭವಾಗಲಿದೆ.

********ಮುಕ್ತಾಯ*******